ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಯರಗೇರಾ–584133, ರಾಯಚೂರು, ಕರ್ನಾಟಕ, ಭಾರತ

Office No. +919141030953 ಪರೀಕ್ಷಾ ವಿಭಾಗ E-mail: registrareval@raichuruniversity.ac.in

ಕ್ರ.ಸಂ: ರಾವಿರಾ/ಪರೀಕ್ಷಾ/ಯು.ಜಿ–VI/2024–25/617 ದಿನಾಂಕ:21.10.2024

## ಸುತ್ತೋಲೆ

**ವಿಷಯ:** ಸ್ನಾತಕ(UG) BA/BCOM/BSC/BCA/BBA ಕೋರ್ಸ್‌ಗಳ ಆರನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳು ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ನಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ನೊಂದಣಿ ಕುರಿತು.

*****

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಎಲ್ಲಾ ಸ್ನಾತಕ(UG) ಕಾಲೇಜುಗಳ ವಿದ್ಯಾರ್ಥಿಗಳಿಗೆ ಹಾಗೂ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಮಾನ್ಯ ಕುಲಪತಿಗಳ ಅನುಮೋದನೆಯ ಮೇರೆಗೆ ಸ್ನಾತಕ(UG) BA/BCOM/BSC/BCA/BBA ಕೋರ್ಸ್‌ಗಳ VI ಸೆಮಿಸ್ಟರ್‌ನ ವಿದ್ಯಾರ್ಥಿಗಳು ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ಗಳಲ್ಲಿ ಅನುತ್ತೀರ್ಣರಾದ ವಿಷಯಗಳ ಮಾಹಿತಿಯನ್ನು ಈ ಕೆಳಗೆ ಸೂಚಿಸಲಾದ Link ನ ಮೇಲೆ ಕ್ಲಿಕ್ ಮಾಡಿ ನೊಂದಣಿಮಾಡಿಕೊಳ್ಳತಕ್ಕದ್ದು. ನೊಂದಣಿ ಮಾಡಿಕೊಂಡ ನಂತರ ಅನುತ್ತೀರ್ಣರಾದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆಯ ಆಧಾರದ ಮೇಲೆ ಮುಂಬರುವ ದಿನಗಳಲ್ಲಿ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ಗಳ ವಿಶೇಷ ಪರೀಕ್ಷೆಗಳನ್ನು ನಡೆಸುವುದನ್ನು ರಾಯಚೂರು ವಿಶ್ವವಿದ್ಯಾಲಯವು ತೀರ್ಮಾನಿಸುತ್ತದೆ. ಆದಕಾರಣ ದಿನಾಂಕ 30.10.2024ರ ಒಳಗಾಗಿ ಸ್ನಾತಕ(UG) ಕಾಲೇಜುಗಳ ಎಲ್ಲಾ VI ಸೆಮಿಸ್ಟರ್‌ನ ವಿದ್ಯಾರ್ಥಿಗಳು ನೊಂದಣಿ ಮಾಡಿಕೊಳ್ಳಬೇಕಾಗಿ ಈ ಮೂಲಕ ಸೂಚಿಸಲಾಗಿದೆ.

Link: https://raichuruniversity.ac.in/special-examist-iiird-sem-for-vi-sem-backlog-students/

**ಸೂಚನೆ:** ವಿದ್ಯಾರ್ಥಿಗಳು ಐದನೇ ಸೆಮಿಸ್ಟರ್‌ನಲ್ಲಿದ್ದು ಪ್ರಥಮ ಮತ್ತು ಮೂರನೇ ಸೆಮಿಸ್ಟರ್‌ನ ರಿಪಿಟರ್ಸ್ ವಿಷಯಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಮಾತ್ರ ಈ ನೊಂದಣಿಗೆ ಅನ್ವಯವಾಗುತ್ತದೆ.

(ಪ್ರೊ. ಯರಿಸ್ವಾಮಿ.ಎಂ)
ಕುಲಸಚಿವರು (ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

ಪ್ರತಿಗಳು:

1. ಮಾನ್ಯ ಕುಲಪತಿಗಳು ಆಪ್ತ ಕಾರ್ಯದರ್ಶಿಗಳು/ ಮಾನ್ಯ ಕುಲಸಚಿವರ ಆಪ್ತ ಸಹಾಯಕ ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
2. ಉಪಕುಲಸಚಿವರು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಕುಲಸಚಿವರು(ಮೌಲ್ಯಮಾಪನ) ಆಪ್ತ ಸಹಾಯಕ ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
4. ಜಾಲತಾಣ ವಿಭಾಗ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
5. ಕಚೇರಿ ಪ್ರತಿ.